ನಿಂತು ನಮಾಝ್ ನಿರ್ವಹಿಸಿ, ಅದು ಸಾಧ್ಯವಾಗದಿದ್ದರೆ ಕುಳಿತು ನಿರ್ವಹಿಸಿ, ಅದು ಕೂಡ ಸಾಧ್ಯವಾಗದಿದ್ದರೆ ಮಲಗಿ ನಿರ್ವಹಿಸಿ

ಇಮ್ರಾನ್ ಬಿನ್ ಹುಸೈನ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು:ನನಗೆ ಮೂಲವ್ಯಾಧಿ ಇತ್ತು ಆದ್ದರಿಂದ ನಾನು ನಮಾಝ್ ನಿರ್ವಹಿಸುವ ಬಗ್ಗೆ ಪ್ರವಾದಿಯವರೊಂದಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೇಳಿದಾಗ, ಅವರು ಹೇಳಿದರು: "ನಿಂತು ನಮಾಝ್ ನಿರ್ವಹಿಸಿ, ಅದು ಸಾಧ್ಯವಾಗದಿದ್ದರೆ ಕುಳಿತು ನಿರ್ವಹಿಸಿ, ಅದು ಕೂಡ ಸಾಧ್ಯವಾಗದಿದ್ದರೆ ಮಲಗಿ ನಿರ್ವಹಿಸಿ." [صحيح] [رواه البخاري]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ನಮಾಝನ್ನು ಮೂಲವಾಗಿ ನಿಂತುಕೊಂಡೇ ನಿರ್ವಹಿಸಬೇಕಾಗಿದೆ. ಆದರೆ ನಿಂತು ನಮಾಝ್ ನಿರ್ವಹಿಸಲು ಸಾಧ್ಯವಾಗದಿದ್ದರೆ, ಕುಳಿತು ನಿರ್ವಹಿಸಬೇಕು. ಕುಳಿತು ನಮಾಝ್ ನಿರ್ವಹಿಸಲು ಸಾಧ್ಯವಾಗದಿದ್ದರೆ ಮಲಗಿ ನಿರ್ವಹಿಸಬೇಕು.

http://sunnah.global/hadeeth/kn/show/10951